## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2017–18ನೇ ಸಾಲಿನ ಆಯವ್ಯಯದ ಘೋಷಣೆಯನ್ವಯ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಯಲ್ಲಿ ಮಾದರಿ ಪಾರಂಪರಿಕ ಗ್ರಾಮವನ್ನು ಸ್ಥಾಪಿಸುವ ಯೋಜನೆಯ ಕಾಮಗಾರಿ ನಿರ್ವಹಣೆಯ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಮಾಡಲು ಸದಸ್ಯರ ಸಮಿತಿಯನ್ನು ರಚಿಸುವ ಕುರಿತು.

ಓದಲಾಗಿದೆ :

1. ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 35 ಜೈಅಯೋ 2017, ದಿನಾಂಕ 20.05.2017
2. ಆರ್ಥಿಕ ಇಲಾಖೆಯ ಸಹಮತಿ ಸಂಖ್ಯೆ ಆಇ/309/ವೆಚ್ಚ–06/2017, ದಿನಾಂಕ 18.05.2017.
3. ಯೋಜನೆ ಇಲಾಖೆಯ ಸಹಮತಿ ಸಂಖ್ಯೆ ಯೋಇ/28/ಜಿಯೋವಿ/2017, ದಿನಾಂಕ 18.05.2017

**ಪ್ರಸ್ತಾವನೆ :**

**2017–18ನೇ** ಸಾಲಿನ ಆಯವ್ಯಯ ಘೋಷಣೆಯಲ್ಲಿ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಯಲ್ಲಿ ಮಾದರಿ ಪಾರಂಪರಿಕ ಗ್ರಾಮವನ್ನು ಸ್ಥಾಪಿಸುವ ಯೋಜನೆಗೆ ರೂ.300.00ಲಕ್ಷಗಳನ್ನು ಸುವರ್ಣ ಗ್ರಾಮ ಯೋಜನೆಯ ಲೆಕ್ಕ ಶೀರ್ಷಿಕೆ 4215–02–800–0–02–300 (Lumpsum) ರಡಿ ಒದಗಿಸಿದೆ.

ಇದರನ್ವಯ ಮೇಲೆ (1)ರಲ್ಲಿ ಓದಲಾದಂತೆ, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಇಲ್ಲಿ ಮಾದರಿ ಪಾರಂಪರಿಕ ಗ್ರಾಮವನ್ನು ಸ್ಥಾಪಿಸುವ ಯೋಜನೆಗೆ ರೂ.300.00ಲಕ್ಷಗಳನ್ನು ಕಾರ್ಯನಿರ್ವಾಹಕ ನಿರ್ದೇಶಕರು, MGIRED, ಬೆಂಗಳೂರು ರವರಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ಅನುದಾನ ಬಿಡುಗಡೆ ಮಾಡಿದೆ.

ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಜಕ್ಕೂರು, ಬೆಂಗಳೂರು ಇಲ್ಲಿ ಮಾದರಿ ಪಾರಂಪರಿಕ ಗ್ರಾಮ ಯೋಜನೆ ಕುರಿತಂತೆ ಕ್ರಮ ಕೈಗೊಳ್ಳಲಾಗುತ್ತಿರುವ ಹಿನ್ನೆಲೆಯಲ್ಲಿ ಸದರಿ ಕಾಮಗಾರಿಯ ಸಮರ್ಪಕ ನಿರ್ವಹಣೆಯ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಮಾಡಲು ಒಂದು ಸಮಿತಿಯನ್ನು ರಚಿಸಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ/35/ಜೈಅಯೋ/2017(ಪಿ2) ಬೆಂಗಳೂರು,**

**ದಿನಾಂಕ.01.03.2018**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ **2017–18ನೇ** ಸಾಲಿನ ಆಯವ್ಯಯದಡಿ ಘೋಷಿಸಲಾದಂತೆ MGIRED, ಸಂಸ್ಥೆ ಬೆಂಗಳೂರು ಇಲ್ಲಿ ಮಾದರಿ ಪಾರಂಪರಿಕ ಗ್ರಾಮವನ್ನು ಸ್ಥಾಪಿಸುವ ಯೋಜನೆಯ ಕಾಮಗಾರಿಯ ಸಮರ್ಪಕ ನಿರ್ವಹಣೆಯ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಮಾಡಲು

ಈ ಕೆಳಕಂಡ ಸದಸ್ಯರ ಸಮಿತಿಯನ್ನು ರಚಿಸಿ ಆದೇಶಿಸಿದೆ.

| | |
|---|---|
| 1 | ಶ್ರೀ ಎಂ.ಕೆ ಕೆಂಪೇಗೌಡ, ನಿರ್ದೇಶಕರು(ಪಂ.ರಾಜ್-1), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು |
| 2 | ಶ್ರೀ ಬಿ. ಗುರುಪ್ರಸಾದ್, ಮುಖ್ಯ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು |
| 3 | ಶ್ರೀ ಕೆ.ಬಿ.ಬಿಜ್ಜಳ್, ನಿವೃತ್ತ ಇಂಜಿನಿಯರ್, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಯಮಿತ , ಬೆಂಗಳೂರು |

ಹಾಲಿ ರಚಿಸಲಾಗಿರುವ ಸಮಿತಿಯ ಸದಸ್ಯರು ಕಾಲಕಾಲಕ್ಕೆ ಸಭೆ ಸೇರಿ ಹಂತವಾರು ಕಾಮಗಾರಿಯ ಮೌಲ್ಯಮಾಪನ ಮೇಲ್ವಿಚಾರಣೆ ಕೈಗೊಳ್ಳುವುದು ಹಾಗೂ ಸರ್ಕಾರಕ್ಕೆ ವರದಿ ಮಾಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ಕೃಷ್ಣಪ್ಪ)
ನಿರ್ದೇಶಕರು ~~(ಗ್ರಾಮೂಸೌ-2)~~ ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ,

1. ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಜಕ್ಕೂರು, ಬೆಂಗಳೂರು.
2. ನಿರ್ದೇಶಕರು(ಪಂ.ರಾಜ್-1) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಇಲಾಖೆ, ಬೆಂಗಳೂರು
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಆನಂದ ರಾವ್ ವೃತ್ತ, ಬೆಂಗಳೂರು
4. ಶ್ರೀ ಕೆ.ಬಿ.ಬಿಜ್ಜಳ್, ನಿವೃತ್ತ ಇಂಜಿನಿಯರ್, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಯಮಿತ , ಬೆಂಗಳೂರು

ಪ್ರತಿಯನ್ನು

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನ ಸೌಧ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾಅಪಂ ರಾಜ್ ಇಲಾಖೆ.
3. ನಿರ್ದೇಶಕರು, ಪಿಎಂಐ, ಗ್ರಾಅಪಂ.ರಾಜ್ ಇಲಾಖೆ.
4. ವಿಶೇಷಾಧಿಕಾರಿ, ಇಲಾಖಾ ಗಣಕ ಕೇಂದ್ರ, ಗ್ರಾಅಪಂ.ಇಲಾಖೆ.
5. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿ.